<u>ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಅಫಜಲಪೂರ</u>

<u>ಸಿಸಿ ನಂ.***226/2020***</u>

ಚಾಸಾ-09 ಪ್ರಾಸಾ-06

ಸತ್ಯ ಪ್ರತಿಜ್ಞೆಯ ಮೇರೆಗೆ ಪ್ರಮಾಣಿಕೃತ ಹೇಳಿಕೆ
ಪಡೆದುಕೊಳ್ಳಲಾಯಿತು.
ದಿನಾಂಕ: 12.03.2025

| | | |
|---|---|---|
| ಹೆಸರು | : | ಭೀಮರಾಯ |
| ತಂದೆಯ ಹೆಸರು | : | ಸಾಯಬಗೌಡ |
| ವಯಸ್ಸು | : | 62 ವರ್ಷ |
| ಉದ್ಯೋಗ | : | ನಿವೃತ್ತ PSI |
| ವಾಸಸ್ಥಳ | : | ವಿಜಯಪುರ |

-: <u>ಮುಖ್ಯ ವಿಚಾರಣೆ :- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :-</u>

2013 ರಿಂದ ಜೂನ್-2020 ರ ವರೆಗೆ ದೇವಲ ಗಾಣಗಾಪೂರ ಪೋಲಿಸ ಠಾಣೆಯಲ್ಲಿ ASI ಅಂತಾ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 14.04.2020 ರಂದು ಚಾಸಾ-1 ರವರು ಠಾಣೆಗೆ ಹಾಜರಾಗಿ ಒಂದು ಲಿಖಿತ ದೂರನ್ನು ಹಾಜರು ಪಡಿಸಿದ್ದು, ಸದರಿ ದೂರಿನ ಸಾರಾಂಶದ ಮೇರೆಗೆ ನಮ್ಮ ಠಾಣಾ ಗುನ್ನೆ ನಂ.36/2020 ಅಂತಾ ದಾಖಲು ಮಾಡಿಕೊಂಡು, ಪ್ರ.ವ.ವ.ಯನ್ನು ತಯ್ಯಾರಿಸಿ ಮಾನ್ಯ ನ್ಯಾಯಾಲಯಕ್ಕೆ ಕಳುಹಿಸಿಕೊಟ್ಟಿರುತ್ತೇನೆ. ಸದರಿ ದಿನದಂದು ಗುನ್ನೆ ಸ್ಥಳಕ್ಕೆ ಹೋಗಿ ಚಾಸಾ-2 ಮತ್ತು 3 ರವರ ಸಮಕ್ಷಮ 04.30 ರಿಂದ 05.35PM ವರೆಗೆ ಚಾಸಾ-1 ರವರು ತೋರಿಸಿದ ಗುನ್ನೆ ಸ್ಥಳದಲ್ಲಿ ಪಂಚನಾಮೆ ಮಾಡಿ ಪಂಚರ ಸಹಿ ಪಡೆದುಕೊಂಡಿರುತ್ತೇನೆ. ಚಾಸಾ-4 ರಿಂದ 8 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ.

ಪ್ರಕರಣದ ಆರೋಪಿಯನು ದಸ್ತಗಿರಿ ಮಾಡಿ, ಆತನ ಸ್ವ-ಖುಷಿ ಹೇಳಿಕೆ ಪಡೆದುಕೊಂಡು ಆತತನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ದಿಃ 16.04.2020 ರಂದು ಗುನ್ನೆ ಸ್ಥಳದ ಪಹಣಿ ಪತ್ರಿಕೆಯನ್ನು ಸಂಗ್ರಹಿಸಿ ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ ದಿಃ17.04.2020 ರಂದು ತನಿಖೆ ಪೂರ್ಣಗೊಂಡ ಪ್ರಯುಕ್ತ ನ್ಯಾಯಾಲಯಕ್ಕೆ ಅಂತಿಮ ದೋಷಾರೋಪಣೆ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

ಸಾಕ್ಷಿಗೆ ದೂರಿನ ಪ್ರತಿಯನ್ನು ತೋರಿಸಿದ್ದು, ಅದರಲ್ಲಿರುವ ಸಾಕ್ಷಿಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿ ಸಹಿಯನ್ನು ನಿಪಿ-**1**(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಗುನ್ನೆ ಪಂಚನಾಮೆಯ ಪ್ರತಿಯನ್ನು ತೋರಿಸಿದ್ದು, ಅದರಲ್ಲಿರುವ ಸಾಕ್ಷಿಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿ ಸಹಿಯನ್ನು ನಿಪಿ-**2**(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ತಾವು ಸಂಗ್ರಹಿಸಿದ್ದೆವು ಎಂದು ಹೇಳುವ ಗುನ್ನೆ ಸ್ಥಳದ ಪಹಣಿ ಪತ್ರಿಕೆಯ ಪ್ರತಿಯನ್ನು ತೋರಿಸಿದ್ದು, ಸಾಕ್ಷಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-**6** ಎಂದು ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿ ಸಹಿಯನ್ನು ನಿಪಿ-**6**(ಎ) ಎಂದು ಗುರುತಿಸಲಾಯಿತು. ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ.

ಪಾಟೀ ಸವಾಲುಃ ಆರೋಪಿ ಪರ ಶ್ರೀ **DMD** ವಕೀಲರಿಂದಃ-

ಆರೋಪಿ ಪರ ವಕೀಲರು ಗೈರ ಹಾಜರುವಿದ್ದರಿಂದ ಪಾಟೀ ಸವಾಲು ಇಲ್ಲಾವೆಂದು ತೆಗೆದುಕೊಳ್ಳಲಾಯಿತು._

ಮರು ವಿಚಾರಣೆಃ - ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ ದಂಡಾಧಿಕಾರಿಗಳು
ಅಫಜಲಪೂರ